ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ ಮತ್ತು ನ್ಯಾಕ್ ನಿಂದ 'ಬಿ' ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440, ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 Email: jsscwk@gmail.com www.jsscwkgl.org

**ಪ್ರಕಟಣೆ ಕೃಪೆಗಾಗಿ**

## ಪೂರ್ವ ಯೋಜನೆಯಂತೆ ಗುರಿ ಸಾಧಿಸಿ– ಪ್ರೊ ಮೊರಬದ ಮಲ್ಲಿಕಾರ್ಜುನ

## ಜೆಎಸ್‌ಎಸ್ ಕಾಲೇಜಿನಲ್ಲಿ ಪ್ರಗತಿ ಪರಿಶೀಲನಾ ಸಭೆ

ಕೊಳ್ಳೇಗಾಲ: 14.2.19 ವಿದ್ಯಾರ್ಥಿ ಸಮೂಹದ ಸಮಗ್ರ ಬೆಳವಣಿಗೆಗೆ ಯೋಜನೆ ರೂಪಿಸಿಕೊಂಡು ಪೂರ್ವ ಯೋಜನೆಯಂತೆ ಗುರಿ ಸಾಧಿಸಿ ಎಂದು ಆಡಳಿತ ಮಂಡಳ ಹಿರಿಯ ಸದಸ್ಯರಾದ ಡಾ.ಶಿವರುದ್ರಸ್ವಾಮಿ ತಿಳಿಸಿದರು.

ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಕಾಲೇಜು ಆಡಳಿತ ಮಂಡಳಿಯ 29ನೆಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾಲೇಜು ಗ್ರಾಮೀಣ ಭಾಗದಿಂದ ಬರುವ ವಿದ್ಯಾರ್ಥಿನಿಯರನ್ನು ಹೆಚ್ಚಿನ ಸಂಖ್ಯೆಯಲ್ಲಿ ಹೊಂದಿದೆ. ಮಹಿಳೆಯರಿಗೆ ಶಿಕ್ಷಣ ನೀಡುವುದು ಪೂರ್ವ ಜನ್ಮದ ಪುಣ್ಯವೆಂದೇ ಭಾವಿಸಿ. ಇಲ್ಲಿ ಪದವಿ ಪಡೆದ ವಿದ್ಯಾರ್ಥಿನಿಯರು ಉನ್ನತ ಸ್ಥಾನಗಳಲದ್ದು ಸಮಾಜೊದ್ಧಾರಕ ಕಾರ್ಯಗಳಲ್ಲಿ ತೊಡಗಸಿಕೊಳ್ಳುತ್ತಿದ್ದಾರೆ. ಪಟ್ಟಣದ ಕಾಲೇಜುಗಳಲ್ಲಿನ ಫಲತಾಂಶಕ್ಕಿಂತಲೂ ಉತ್ತಮ ಫಲತಾಂಶ ಮತ್ತು ಮೌಲ್ಯಗಳನ್ನು ಹೊಂದಿರುವುದು ಸಂತಸದ ವಿಷಯ ಎಂದು ತಿಳಿಸಿದರು.

ಸಭೆಯ ನಂತರ ಮಾತನಾಡಿದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ.ಮೊರಬದ ಮಲ್ಲಿಕಾರ್ಜುನರವರು ಕಾಲೇಜಿನಲ್ಲಿ ಕ್ರೀಡೆ, ಸಾಂಸ್ಕೃತಿಕ, ವಿಶೇಷ ಉಪನ್ಯಾಸ, ಆರೋಗ್ಯ ಕ್ಷೇತಗಳನ್ನೊಳಗೊಂಡಂತೆ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಿ ವಿದ್ಯಾರ್ಥಿಗಳಿಗೆ ಸಮಾಜದಲ್ಲಿನ ತಮ್ಮ ಪಾತ್ರದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಸ್ವಚ್ಛತೆ ಹಾಗೂ ಹಸಿರೀಕರಣಕ್ಕೆ ಪ್ರಾಮುಖ್ಯತೆ ನೀಡಲಾಗುತ್ತಿದೆ. ಆಧುನಿಕ ಬೋಧನಾ ಸಲಕರಣೆಗಳ ಸುಸಜ್ಜಿತ ಗ್ರಂಥಾಲಯದಿಂದ ವಿದ್ಯಾರ್ಥಿಗಳಿಗೆ ಪ್ರಸ್ತುತ ಅಗತ್ಯವಿರುವ ವಿದ್ಯಮಾನಗಳನ್ನು ತಿಳಸಲಾಗುತ್ತಿದೆ. ಉತ್ತಮ ಶಿಕ್ಷಣದಿಂದ ಉತ್ತಮ ಸಮಾಜ ಎಂದು ಭಾವಿಸಿ ಅಧ್ಯಾಪಕವೃಂದ ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ಶ್ರಮಿಸುತ್ತಿರುವುದು ಸಂತೋಷ ಎಂದು ತಿಳಿಸಿದರು.

ಸಭೆಯಲ್ಲಿ ಸದಸ್ಯರಾದ ಡಾ.ಎಂ.ಪ್ರಭು, ಪ್ರೊ.ಸೋಮಣ್ಣ, ಪ್ರಾಚಾರ್ಯ ಪ್ರೊ.ಉಮೇಶ ಮತ್ತಿತರರು ಹಾಜರಿದ್ದರು.



ಸಭೆಯ ನಂತರ ಅಧ್ಯಾಪಕರ ಜೊತೆ ಕಾಲೇಜು ಆಡಳಿತ ವಿಭಾಗದ ನಿರ್ದೇಶಕರು

ಪ್ರೊ.ಮೊರಬದ ಮಲ್ಲಿಕಾರ್ಜುನ

